# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಾವಣಗೆರೆ, ಜಿಲ್ಲಾ ಪಂಚಾಯ್ತಿ ವ್ಯಾಪ್ತಿಯಲ್ಲಿ ಪ್ರಿಂಟಿಂಗ್ ಸಾಮಾಗ್ರಿಗಳ ಖರೀದಿಯಲ್ಲಿನ ಅವ್ಯವಹಾರದಲ್ಲಿ ಭಾಗಿಯಾಗಿರುವ ಆರೋಪಿತ ಅಧಿಕಾರಿ / ನೌಕರರ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸಲು ಬದಲಿ ವಿಚಾರಣಾಧಿಕಾರಿಯನ್ನು ನೇಮಕಾತಿ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ.111 ವಿಸೇವಿ 2006 ದಿನಾಂಕ 09.07.2013.

2. ವಿಚಾರಣಾಧಿಕಾರಿಯವರ ಪತ್ರ ದಿನಾಂಕ 06.03.2014.

----------

**ಪ್ರಸ್ತಾವನೆ:**

ದಾವಣಗೆರೆ ಜಿಲ್ಲಾ ಪಂಚಾಯತ್, ವ್ಯಾಪ್ತಿಯ ವಿವಿಧ ಕಛೇರಿಗಳಲ್ಲಿ ಪ್ರಿಂಟಿಂಗ್ ಸಾಮಗ್ರಿಗಳ ಖರೀದಿಯಲ್ಲಿನ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಹಣ ದುರುಪಯೋಗ/ ಕರ್ತವ್ಯಲೋಪಕ್ಕೆ ಕಾರಣರಾದ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು ಸದರಿ ನಿಯಮಗಳ 13ರಂತೆ ಜಂಟಿ ಇಲಾಖೆ ವಿಚಾರಣೆ ನಡೆಸಲು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 09.07.2013ರ ಸರ್ಕಾರಿ ಆದೇಶದಲ್ಲಿ ವಿಚಾರಣಾಧಿಕಾರಿಯಾಗಿ ಶ್ರೀ ಪಲ್ಲೇದ ನಿವೃತ್ತ ನ್ಯಾಯಾಧಿಶರು ಇವರನ್ನು ನೇಮಿಸಲಾಗಿತ್ತು.

ವಿಚಾರಣಾಧಿಕಾರಿಯವರು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 06.03.2014ರ ಪತ್ರದಲ್ಲಿ ಗದಗ ದಿಂದ ದಾವಣಗೆರೆಗೆ ಬಂದು ವಿಚಾರಣೆ ನಡೆಸಲು ಆರೋಗ್ಯದ ದೃಷ್ಟಿಯಿಂದ ಆಗುತ್ತಿಲ್ಲವೆಂದೂ, ಆದ್ದರಿಂದ ಈ ಪ್ರಕರಣದ ಇಲಾಖಾ ವಿಚಾರಣೆ ನಡೆಸಲು ಬೇರೊಬ್ಬ ವಿಚಾರಣಾಧಿಕಾರಿಯನ್ನು ನೇಮಿಸಬಹುದೆಂದು ತಿಳಿಸಿರುತ್ತಾರೆ.

ಆದ್ದರಿಂದ ಸರ್ಕಾರವು ಪ್ರಕರಣದ ಇಲಾಖಾ ವಿಚಾರಣೆ ನಡೆಸಲು ಶ್ರೀ ಪಲ್ಲೇದ ನಿವೃತ್ತ ನ್ಯಾಯಾಧೀಶರು ಇವರ ಬದಲಿಗೆ ಶ್ರೀ ಡಿ.ವಿ. ಶೇಟ್, ನಿವೃತ್ತ ನ್ಯಾಯಾಧಿಶರು ಇವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಲು ತೀರ್ಮಾನಿಸಿದೆ. ಅದರನ್ವಯ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 111 ವಿಸೇಬಿ 2006, ಬೆಂಗಳೂರು, ದಿನಾಂಕ: 09-04-2014**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳಿಂದ, ಪ್ರಕರಣದ ಜಂಟಿ ಇಲಾಖೆ ವಿಚಾರಣೆ ನಡೆಸಲು ಶ್ರೀ ಪಲ್ಲೇದ ನಿವೃತ್ತ ನ್ಯಾಯಾಧಿಶರು ಇವರ ಬದಲಿಗೆ ಶ್ರೀ ಡಿ.ವಿ. ಶೇಟ್, ನಿವೃತ್ತ ನ್ಯಾಯಾಧಿಶರು ಇವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಿದೆ.

ಉಪ ಕಾರ್ಯದರ್ಶಿ, ಜಿಲ್ಲಾಪಂಚಾಯ್ತಿ, ದಾವಣಗೆರೆ ಇವರು ಮಂಡನಾಧಿಕಾರಿಯಾಗಿ ಮುಂದುವರೆದಿರುತ್ತಾರೆ.

ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣೆಯನ್ನು ಕನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ 11 ರಡಿ ಕಾರ್ಯವಿಧಾನದ ಪ್ರಕಾರ ಜರುಗಿಸಿ ಇಲಾಖಾ ವಿಚಾರಣಾ ವರದಿಯನ್ನು ನಾಲ್ಕು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗದಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರು ವಿಚಾರಣಾಧಿಕಾರಿಯವರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

೦. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
೦. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ/ಬಂಧರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
೦. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ
೦. ಶ್ರೀ ಎಸ್. ಜಿ. ಪಲ್ಲೇದ್ ನಿವೃತ್ತ ಜಿಲ್ಲಾ ನ್ಯಾಯಾಧೀಶರು, (ವಿಚಾರಣಾಧಿಕಾರಿಗಳು) ಅಧ್ಯಕ್ಷರು, ಜಿಲ್ಲಾ ಗ್ರಾಹಕರ ವೇದಿಕೆ, ಗದಗ ಜಿಲ್ಲೆ, ಗದಗ. ದೂರವಾಣಿ ಸಂ.08372- 252515 ಮೊಬೈಲ್ : 9448390200
೦. ಶ್ರೀ ಡಿ.ವಿ. ಶೇಟ್, ನಿವೃತ್ತ ನ್ಯಾಯಾಧೀಶರು, ಆದರ್ಶಸೈದಾಪುರ, ಧಾರವಾಡ (ಮೊಬೈಲ್ ಸಂಖ್ಯೆ: 9448981542)
೦. ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ದಾವಣಗೆರೆ (ಮಂಡನಾಧಿಕಾರಿ)
೦. ಸಂಬಂಧಿಸಿದ ಅಧಿಕಾರಿಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರ ಮುಖಾಂತರ)
೦. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಕಾರ್ಯದರ್ಶಿ(ಪಂ.ರಾಜ್) / ಅಪರ ಕಾರ್ಯದರ್ಶಿ (ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
೦. ಮೇಲ್ವಿಚಾರಕರು,ಗಣಕ ಕೋಶ, ಗ್ರಾ.ಅ. & ಪಂ.ರಾಜ್ ಇಲಾಖೆ.
೦. ಮಾಹಿತಿ ಕೇಂದ್ರ/ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿ